**ಕರ್ನಾಟಕ ಸರ್ಕಾರ**
ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ನಿರ್ದೇಶನಾಲಯ
ನಿರ್ದೇಶಕರ ಕಛೇರಿ, ನೆಲಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ.ಅಂಬೇಡ್ಕರ್ ವೀಧಿ,
ಬೆಂಗಳೂರು-560001, ದೂ.ಸಂ.080-22860907, ಇ-ಮೇಲ್ ವಿಳಾಸ:dirdwdscka@gmail.com

---

**ಸಂಖ್ಯೆ: ವಿಹಿನಿ/ಜದಇ/ಸಿ3/03/2024-25/2025-26/1584** **ದಿನಾಂಕ:21.08.2025**

**ಸುತ್ತೋಲೆ**

ವಿಷಯ: ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು ಡಿ.ಬಿ.ಟಿ ನೇರ ನಗದು ವರ್ಗಾವಣೆ ತಂತ್ರಾಂಶದಡಿ ಅಳವಡಿಸಿ ಲೈವ್ ಮಾಡಿರುವ ಕುರಿತು.

ಉಲ್ಲೇಖ:- ಯೋಜನಾ ನಿರ್ದೇಶಕರು ಸೇವಾ ಸಿಂಧು ತಂತ್ರಾಂಶ ಇವರ ಇ-ಮೇಲ್ ದಿನಾಂಕ:20.08.2025

*******

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025-26ನೇ ಸಾಲಿನಲ್ಲಿ ಉಲ್ಲೇಖಿತ ಪತ್ರದನ್ವಯ ಯೋಜನಾ ನಿರ್ದೇಶಕರು ಸೇವಾಸಿಂಧು ತಂತ್ರಾಂಶ ಇವರು ಇಲಾಖೆಯ ಯೋಜನೆಗಳು ಡಿ.ಬಿ.ಟಿ. (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆಯಲಿ ಅಳವಡಿಸಲು ತಂತ್ರಾಂಶವನ್ನು ರೂಪಿಸಲಾಗಿರುತ್ತದೆ. ಈ ಯೋಜನೆಗಳನ್ನು ಆನ್‌ಲೈನ್ ವೇದಿಕೆಯಲ್ಲಿ ಅನುಷ್ಠಾನಗೊಳಿಸುವ ಉದ್ದೇಶದಿಂದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುವ ಯೋಜನೆಗಳ ಪಟ್ಟಿ ಈ ಕೆಳಕಂಡಂತಿರುತ್ತದೆ.

| **ಯೋಜನೆಗಳ ವಿವರ.** | | | |
|---|---|---|---|
| 1 | ಆಧಾರ ಯೋಜನೆ. | 8 | ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ಟಾಪ್ ಯೋಜನೆ. |
| 2 | ವೈದ್ಯಕೀಯ ಪರಿಹಾರ ನಿಧಿ ಯೋಜನೆ. | 9 | ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ. |
| 3 | ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ | 10 | ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ. |
| 4 | ನಿರುದ್ಯೋಗ ಭತ್ಯೆ. | 11 | ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ |
| 5 | ಶಿಶುಪಾಲನಾ ಭತ್ಯೆ. | 12 | ಸಾಧನ ಸಲಕರಣೆಗಳ ಯೋಜನೆ. |
| 6 | ಮರಣ ಪರಿಹಾರ ನಿಧಿ. | 13 | ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ |
| 7 | ಪ್ರತಿಭೆ ಯೋಜನೆ. | | |

ಈ ಹಿನ್ನಲೆಯಲ್ಲಿ ನಿಮ್ಮ ಜಿಲ್ಲೆಗಳಲ್ಲಿ ಈ ಮೇಲಿನ 13 ಯೋಜನೆಗಳು ಲೈವ್ ಆಗಿರುವ ಕುರಿತು ಹಾಗೂ ಸದರಿ ಯೋಜನೆಗಳಿಗೆ 2025-26ನೇ ಸಾಲಿಗೆ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು-ಒನ್ ಹಾಗೂ ನೇರವಾಗಿಯು ಸಹ ವಿಕಲಚೇತನ ವ್ಯಕ್ತಿಗಳು ಅರ್ಜಿ ಸಲ್ಲಿಸಲು (https://sevasindhu.karnataka.gov.in/Sevasindhu/Kannada) ಪ್ರಾರಂಭದ ದಿ:-20.08.2025 ಮತ್ತು ಕೊನೆಯ ದಿ:30.09.2025 ಆಗಿದ್ದು ಈ ಸಂಬಂಧ ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ವಿ.ಆರ್.ಡಬ್ಲ್ಯೂ, / ಎಂ.ಆರ್.ಡಬ್ಲ್ಯೂ ಮತ್ತು ಯು.ಆರ್.ಡಬ್ಲ್ಯೂಗಳ ಮೂಲಕ ಹಾಗೂ ಸ್ಥಳಿಯ ದಿನ ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸುವ ಮೂಲಕ ವ್ಯಾಪಕ ಪ್ರಚಾರ ನೀಡಲು ತಿಳಿಸಿದೆ.

ಮುಂದುವರೆದು 2025-26ನೇ ಸಾಲಿನಲ್ಲಿ ಈ ಯೋಜನೆಗಳ ಸೌಲಭ್ಯವನ್ನು ಆನ್‌ಲೈನ್ ಮೂಲಕ ಫಲಾನುಭವಿಗಳಿಗೆ ನಿಯಮಾನುಸಾರ ತಲುಪಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.

ತಮ್ಮ ವಿಶ್ವಾಸಿ,

21/8/25

**ನಿರ್ದೇಶಕರು,**
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ, ಬೆಂಗಳೂರು.

**ಪ್ರತಿಯನ್ನು:-**

1. ಸರ್ಕಾರದ ಕಾರ್ಯದರ್ಶಿಗಳು, ಮಹಿಳೆಯರ ಹಾಗೂ ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಯೋಜನಾ ನಿರ್ದೇಶಕರು, ಸೇವಾಸಿಂಧು ಯೋಜನೆ, ಇ-ಆಡಳಿತ ಕೇಂದ್ರ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.

3. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು ಮಹಿಳೆಯರ ಮತ್ತು ಮಕ್ಕಳ ಅಭಿವೃಧಿ ಇಲಾಖೆ ರವರ ಮಾಹತಿಗಾಗಿ.
4. ಎಲ್ಲಾ ಜಿಲ್ಲೆಗಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ರವರ ಸೂಕ್ತ ಕ್ರಮಕ್ಕಾಗಿ.
5. ಕಛೇರಿ ಪ್ರತಿ.